**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 20 (60) |
| **ವಿಧಾನ ಪರಿಷತ್ತಿನ ಸದಸ್ಯರ ಹೆಸರು:** | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| **ಉತ್ತರಿಸಬೇಕಾದ ದಿನಾಂಕ:** | 04-12-2023 |
| **ಉತ್ತರಿಸುವ ಸಚಿವರು:** | ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದೇಶದಲ್ಲಿ ದಕ್ಷಿಣ ಭಾರತದ ರಾಜ್ಯಗಳು ಮೂಲಭೂತ ಸೌಕರ್ಯ ಕಲ್ಪಿಸುವಲ್ಲಿ ಮುಂಚೂಣಿಯಲ್ಲಿದ್ದು, ಅದರಲ್ಲೂ ಕರ್ನಾಟಕ ರಾಜ್ಯ ಒಳಗೊಂಡಂತೆ ವೈದ್ಯಕೀಯ ಶಿಕ್ಷಣ ಕ್ಷೇತ್ರದಲ್ಲಿ ಮಹತ್ವದ ವೈದ್ಯಕೀಯ ಕಾಲೇಜುಗಳನ್ನು ದಕ್ಷಿಣ ರಾಜ್ಯಗಳು ಹೊಂದಿರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಆ) | ಹಾಗಿದ್ದಲ್ಲಿ, ರಾಜ್ಯದ ವಿದ್ಯಾರ್ಥಿಗಳಲ್ಲಿ ಇತರೆ ದಕ್ಷಿಣ ರಾಜ್ಯಗಳ ವಿದ್ಯಾರ್ಥಿಗಳಂತೆ ನೀಟ್ ಪರೀಕ್ಷೆಯಲ್ಲಿ ಉತ್ತರ ಭಾರತದ ವಿದ್ಯಾರ್ಥಿಗಳು ಮೇಲ್ಮಟ್ಟ ಸಾಧಿಸಿ, ತಮ್ಮ ವೈದ್ಯಕೀಯ ಕಲಿಕೆ ಅವಕಾಶ ಕಿತ್ತುಕೊಳ್ಳಲು ಕಾರಣರಾಗಿದ್ದಾರೆ ಎನ್ನುವ ಶಂಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಬಗೆಹರಿಸಿ. ರಾಜ್ಯದ ವೈದ್ಯಕೀಯ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಲು ಕೈಗೊಂಡಿರುವ ಕ್ರಮಗಳೇನು; | ರಾಜ್ಯದಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ ನೀಟ್ ಪ್ರವೇಶ ಪರೀಕ್ಷೆಯ ಅಂಕಗಳ ಆಧಾರದ ಮೇಲೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಮೆರಿಟ್/ಮೀಸಲಾತಿಯನ್ವಯ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನಡೆಸಿ ವೈದ್ಯಕೀಯ ಸೀಟುಗಳನ್ನು ಹಂಚಿಕೆ ಮಾಡಲಾಗುತ್ತಿದೆ.<br><br>ಕರ್ನಾಟಕದಲ್ಲಿನ ಆಕಾಂಕ್ಷಿ ವಿದ್ಯಾರ್ಥಿಗಳ ಹಿತಾಸಕ್ತಿಗಳನ್ನು ಕಾಪಾಡಲು, ಖಾಸಗಿ ವೈದ್ಯಕೀಯ ಕಾಲೇಜಿನಲ್ಲಿ ನಿರ್ದಿಷ್ಟ ಸೀಟುಗಳನ್ನು ಕರ್ನಾಟಕದ ವಿದ್ಯಾರ್ಥಿಗಳಿಂದ ಮಾತ್ರ ಭರ್ತಿ ಮಾಡಲು ಅನುವು ಮಾಡಿಕೊಡಲಾಗಿದ್ದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಹೊರಡಿಸಿದ ಕೈಪಿಡಿಯಲ್ಲಿ ಸದರಿ ವಿಷಯದ ಕುರಿತು ವಿವರಿಸಲಾಗಿದೆ. |
| ಇ) | ರಾಜ್ಯದ ಹಲವಾರು ಪ್ರತಿಭಾವಂತ ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣದ ಅವಕಾಶದಿಂದ ವಂಚಿತರಾಗಿ ಬೇರೆ ದೇಶಗಳಿಗೆ ವೈದ್ಯಕೀಯ ಶಿಕ್ಷಣಕ್ಕೆ ತೆರಳಿ, ಆ ದೇಶದಲ್ಲಿನ ಯುದ್ಧದ ಪರಿಸ್ಥಿತಿಯಲ್ಲಿ ಶಿಕ್ಷಣ ಅಭ್ಯಾಸದ ಮಧ್ಯದಲ್ಲಿ ಹಿಂದಿರುಗಿರುವುದು | ಸರ್ಕಾರದ ಗಮನಕ್ಕೆ ಬಂದಿದೆ. ಯುದ್ಧದ ಪರಿಸ್ಥಿತಿಯಲ್ಲಿ ವೈದ್ಯಕೀಯ ವಿದ್ಯಾಭ್ಯಾಸ ಮೊಟಕುಗೊಳಿಸಿ ರಾಜ್ಯಕ್ಕೆ ಹಿಂತಿರುಗಿರುವ ಪ್ರಕರಣಗಳು ಕರ್ನಾಟಕ ರಾಜ್ಯದಲ್ಲಿ ಮಾತ್ರವಲ್ಲದೇ, ಭಾರತದ ಇತರೆ ರಾಜ್ಯಗಳ ವಿದ್ಯಾರ್ಥಿಗಳನ್ನು ಸಹ ಒಳಗೊಂಡಿರುವ ಕಾರಣ ರಾಷ್ಟ್ರೀಯ ವೈದ್ಯಕೀಯ ಆಯೋಗ(NMC)ವು ಈ ವಿಷಯದಲ್ಲಿ |

| | | |
|---|---|---|
| | ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇಂತಹ ಸನ್ನಿವೇಶಗಳು ಮರುಕಳಿಸದಂತೆ ಸರ್ಕಾರವು ವಹಿಸಿರುವ ಎಚ್ಚರಿಕೆ ಕ್ರಮಗಳು ಯಾವುವು: ಪೂರ್ಣ ಮಾಹಿತಿ ನೀಡುವುದು? | ಏಕರೂಪದ ನೀತಿಯನ್ನು ಕೈಗೊಳ್ಳಬೇಕಾಗಿರುತ್ತದೆ. ರಾಷ್ಟ್ರೀಯ ವೈದ್ಯಕೀಯ ಆಯೋಗದ ಸಲಹೆಯನ್ನು/ಮಾರ್ಗದರ್ಶನವನ್ನು ಅನುಸರಿಸಲಾಗುತ್ತಿದೆ. |

No: MED 148 RGU 2023

(ಡಾ:ಶರಣ ಪ್ರಕಾಶ ಆರ್ ಪಾಟೀಲ)
ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ
ಜೀವನೋಪಾಯ ಸಚಿವರು